**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್: :2020-21 ದಿನಾಂಕ: 13.07.2021

## ವಾರ್ಡ್ ಸಮಿತಿ ಸಭೆ ನಡವಳಿಗಳು

**ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ: ಬಿ12(5)/ಪಿ.ಆರ್/35/2020-21, ದಿನಾಂಕ: 16.04.2021ರ ಆದೇಶದಂತೆ ದಿನಾಂಕ: 13.07.2021ರಂದು ನಡೆದ ಬಾಗಲಗುಂಟೆ ವಾರ್ಡ್ ನಂ. 14 ರ ಸಭೆಯ ನಡವಳಿಗಳು:-**

**ಸಭೆಗೆ ಹಾಜರಾಗಿದ್ದವರ ವಿವರಗಳು:-**

| ಕ್ರಸಂ | ಹೆಸರು ಶ್ರೀಮತಿ / ಶ್ರೀ | ಪದನಾಮ |
|---|---|---|
| 1 | ಶ್ರೀ.ಕೆ. ಮರುಳಸಿದ್ದಪ್ಪ | ಕಾರ್ಯಪಾಲಕ ಅಭಿಯಂತರರು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ. ವೆಂಕಟೇಶಪ್ಪ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್-14 |
| 3 | ಶ್ರೀ. ಡಾ॥ ವರುಣ್ ಕುಮಾರ್ | ಕೋವಿಡ್ ಮೆಡಿಕಲ್ ಆಫೀಸರ್, ಬಾಗಲಗುಂಟೆ ಪ್ರಾಥಮಿಕ ಆರೋಗ್ಯ ಕೇಂದ್ರ |
| 4 | ಶ್ರೀಮತಿ. ಡಾ॥ ಚಂದನ | ವೈದ್ಯಾಧಿಕಾರಿಗಳು, ಬಾಗಲಗುಂಟೆ ಪ್ರಾಥಮಿಕ ಆರೋಗ್ಯ ಕೇಂದ್ರ |
| 5 | ಶ್ರೀ. ಅಮರನಾಥ್ | ಸಹಾಯಕ ಅಭಿಯಂತರರು, ಬೃಹತ್ ಮಳೆನೀರುಗಾಲುವೆ |
| 6 | ಶ್ರೀ. ಮೋಹನ್ ಗೌರೋಜಿ | ಹಿರಿಯ ಆರೋಗ್ಯ ನಿರೀಕ್ಷಕರು |
| 7 | ಶ್ರೀಮತಿ. ಚೈತ್ರ.ಎಂ | ಕಿರಿಯ ಆರೋಗ್ಯ ನಿರೀಕ್ಷಕರು |
| 8 | ಶ್ರೀ.ಶಿವಲಿಂಗೇಗೌಡ | ತೋಟಗಾರಿಕೆ ಇಲಾಖೆ, ದಾಸರಹಳ್ಳಿ ವಲಯ, ಬಿಬಿಎಂಪಿ |
| 9 | ಶ್ರೀ. ವೆಂಕಟರಮಣಪ್ಪ | ವಾಟರ್ ಇನ್ಸ್‌ಸ್ಪೆಕ್ಟರ್, ಬಿಡಬ್ಲ್ಯೂ.ಎಸ್.ಎಸ್.ಬಿ |
| 10 | ಶ್ರೀ.ರಾಮ್ ಕುಮಾರ್ | ವಾಟರ್ ಇನ್ಸ್‌ಸ್ಪೆಕ್ಟರ್, ಬಿಡಬ್ಲ್ಯೂ.ಎಸ್.ಎಸ್.ಬಿ |
| 11 | ಶ್ರೀ. ಕೃಷ್ಣಮೂರ್ತಿ | ಡಿಫೆನ್ಸ್ ಕಾಲೋನಿ, ನಾಗರೀಕ ಹಿತರಕ್ಷಣಾ ಸಮಿತಿ |
| 12 | ಶ್ರೀ. ಲಕ್ಷ್ಮಿ ವೆಂಕಟೇಶ್ | ಮುನಿಕೊಂಡಪ್ಪ ಬಡಾವಣೆ, ನಾಗರೀಕ ಹಿತರಕ್ಷಣಾ ಸಮಿತಿ |
| 13 | ಶ್ರೀ. ಮುದ್ದ ಹನುಮೇಗೌಡರು | ನಾಗರೀಕ ಹಿತರಕ್ಷಣಾ ಸಮಿತಿ, ಸಿಡೇದಹಳ್ಳಿ |
| 14 | ಶ್ರೀ. ಸದಾಶಿವ | ನಾಗರೀಕ ಹಿತರಕ್ಷಣಾ ಸಮಿತಿ, ಎಂ.ಇ.ಐ ಬಡಾವಣೆ |

ನೋಡಲ್ ಅಧಿಕಾರಿಗಳು, ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

- ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆದ್ಯತೆಯ ಮೇಲೆ ಪೂರೈಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.
- **ವಾರ್ಡ್ ಮಟ್ಟದಲ್ಲಿ WDC (Ward Decentralized Triage and Emergency Response (DETER) Committee for Covid 19 Management) ಸಮಿತಿಯ ಬಗ್ಗೆ:-**

ನೋಡಲ್ ಅಧಿಕಾರಿ ರವರು ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ No: RD 158 TNR 2020 (1) ದಿನಾಂಕ: 07.05.2021 ರಂತೆ ವಲಯ ಮಟ್ಟದಲ್ಲಿ Covid Care Center ಕೇಂದ್ರವನ್ನು ಈಗಾಗಲೇ ಮಂಜುನಾಥ ನಗರದ ಕಾರ್ಮಿಕ ಭವನದಲ್ಲಿ ಮತ್ತು ವಾರ್ಡ್ ನಂ. 14ರ ವ್ಯಾಪ್ತಿಯಲ್ಲಿ ವಾರ್ಡ್ ನಂ. 13ರ

ಇಂದಿರಾ ಕ್ಯಾಂಟೀನ್ ಪಕ್ಕದಲ್ಲಿ ಬಿಬಿಎಂಪಿ ವತಿಯಿಂದ ನೂತನವಾಗಿ ನಿರ್ಮಿಸಿರುವ ಡಯಾಲಿಸಿಸ್ ಕಟ್ಟಡದಲ್ಲಿ **Triage** ಕೇಂದ್ರ ಸ್ಥಾಪಿಸಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು ಹಾಗೂ ಕೋವಿಡ್ ಪ್ರಕರಣಗಳು ಕಡಿಮೆ ಆಗಿರುವ ಹಿನ್ನೆಲೆಯಲ್ಲಿ ಮೇಲಾಧಿಕಾರಿಗಳ ಆದೇಶದಂತೆ **Triage** ಕೇಂದ್ರಗಳನ್ನು ಸಂಚಾರಿ ಕೇಂದ್ರಗಳಾಗಿ ಪರಿವರ್ತಿಸಿರುವುದನ್ನು ಸಭೆಯ ಗಮನಕ್ಕೆ ತರಲಾಯಿತು.

(ಕ್ರಮ:ಆರೋಗ್ಯ ವೈದ್ಯಾಧಿಕಾರಿಗಳು (ದಾಸರಹಳ್ಳಿ) ವಲಯ / ಆರೋಗ್ಯ ಅಧಿಕಾರಿಗಳು, ಬಾಗಲಗುಂಟೆ ಪ್ರಾಥಮಿಕ ಆರೋಗ್ಯ ಕೇಂದ್ರ)

- ರಾಜಕಾಲುವೆ ಬಗ್ಗೆ:-

ವಾರ್ಡ್ ವ್ಯಾಪ್ತಿಯಲ್ಲಿನ ಬಹುತೇಕ ರಾಜಕಾಲುವೆಗಳು ಹೂಳಿನಿಂದ ತುಂಬಿದ್ದು, ಮಳೆಗಾಲ ಪ್ರಾರಂಭವಾಗಿರುವುದರಿಂದ ತಗ್ಗು ಪ್ರದೇಶಗಳಲ್ಲಿ ಮಳೆನೀರು ನುಗ್ಗುವ ಸಂಭವವಿರುವುದನ್ನು ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ಗಮನಕ್ಕೆ ತಂದರು. ಮಳೆನೀರುಗಾಲುವೆ ವಿಭಾಗದ ಸಹಾಯಕ ಅಭಿಯಂತರರು ಪ್ರತಿಕ್ರಿಯಿಸಿವಾರ್ಡ್ ನಂ. 14ರ ವ್ಯಾಪ್ತಿಯಲ್ಲಿ ಸುಮಾರು 7.27 ಕಿ.ಮೀ ಉದ್ದದ ರಾಜಕಾಲುವೆ ಇದ್ದು, ಬಾಗಲಗುಂಟೆ ಪೋಲಿಸ್ ಠಾಣೆಯ ಹತ್ತಿರದ ರಾಜಕಾಲುವೆಗೆ ಫೆನ್ಸಿಂಗ್ ಅಳವಡಿಸುವ ಕಾಮಗಾರಿ ಪ್ರಾರಂಭಿಸಲಾಗಿದ್ದು, ಡಿಫೆನ್ಸ್ ಕಾಲೋನಿ 20ನೇ ಅಡ್ಡರಸ್ತೆಯ ಹತ್ತಿರ ಫೆನ್ಸಿಂಗ್ ಅಳವಡಿಸುವ ಕಾಮಗಾರಿಯನ್ನು 15ದಿನಗಳ ಒಳಗಾಗಿ ಪ್ರಾರಂಭಿಸುವುದಾಗಿ ತಿಳಿಸಿದರು. ಧನುಷ್ ಬಡಾವಣೆ, ಸಿದ್ದೇಶ್ವರ ಬಡಾವಣೆ ಹಾಗೂ ರಾಯಲ್ ಎನಕ್ಲೇವ್ ಭಾಗದಲ್ಲಿ ಮಳೆನೀರು ಚರಂಡಿ ಕಾಮಗಾರಿಗಳಿಗೆ ಸಂಭಧಿಸಿದ ಕಾಮಗಾರಿ ಅನುಮೋದನೆ ಹಂತದಲ್ಲಿರುವುದಾಗಿ ಸಭೆಗೆ ತಿಳಿಸಿದರು.

ರಾಜಕಾಲುವೆ ತುಂಬಿರುವುದನ್ನು ಆದ್ಯತೆಯ ಮೇಲೆ ತೆಗೆಯಲು ಮತ್ತು ರಾಜಕಾಲುವೆಗಳಿಗೆ ತ್ಯಾಜ್ಯವನ್ನು ಸುರಿಯದಂತೆ ಮತ್ತು ಸೂಕ್ತ ಕ್ರಮಕ್ಕಾಗಿ ಫೆನ್ಸಿಂಗ್ ಅಳವಡಿಸಲು ಕ್ರಮ ವಹಿಸುವಂತೆ ನೋಡಲ್ ಅಧಿಕಾರಿಗಳು ತಿಳಿಸಿದರು.

(ಕ್ರಮ: ಸಹಾಯಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು/ ಕಾರ್ಯಪಾಲಕ ಅಭಿಯಂತರರು (ರಾಜಕಾಲುವೆ ವಿಭಾಗ)

- ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಪ್ರಕರಣದ ಬಗ್ಗೆ:-

ವಾರ್ಡ್ ವ್ಯಾಪ್ತಿಯಲ್ಲಿ ಈವರೆಗಿನ ಕೋವಿಡ್ ಪ್ರಕರಣಗಳ ಬಗ್ಗೆ ಹಿರಿಯ ಆರೋಗ್ಯ ಪರಿವೀಕ್ಷಕರು, ಈ ಕೆಳಕಂಡಂತೆ ಮಾಹಿತಿ ಒದಗಿಸಿರುತ್ತಾರೆ.

1. ಒಟ್ಟು ಪಾಸಿಟಿವ್ ಪ್ರಕರಣಗಳು 7211
2. ಡಿಸ್ಚಾರ್ಜ್ ಆದ ಪ್ರಕರಣಗಳು – 7061
3. ಸಾವು – 135
4. ಚಾಲ್ತಿಯಲ್ಲಿರುವ ಪ್ರಕರಣಗಳು – 15

ಕೋವಿಡ್ ನಿಯಂತ್ರಣಕ್ಕೆ ಸಂಬಂಧಿಸಿದಂತೆ, ಮಾರ್ಗಸೂಚಿಯಂತೆ ಅಗತ್ಯ ಕ್ರಮ ವಹಿಸುವಂತೆ ಮತ್ತು ನಾಗರೀಕರಲ್ಲಿ ಜಾಗೃತಿ ಮೂಡಿಸಲು ಕ್ರಮ ವಹಿಸಲು ಸಭೆಯಲ್ಲಿ ಚರ್ಚಿಸಲಾಯಿತು.

(ಕ್ರಮ: ಆರೋಗ್ಯ ಪರಿವೀಕ್ಷಕರು / ಆರೋಗ್ಯ ಅಧಿಕಾರಿಗಳು, ಬಾಗಲಗುಂಟೆ ಪ್ರಾಥಮಿಕ ಆರೋಗ್ಯ ಕೇಂದ್ರ)

- ರಸ್ತೆ ಗುಂಡಿ, ಹೂಳು ತೆಗೆಯುವುದು, ಕಸ ವಿಲೇವಾರಿ

ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಗಳಲ್ಲಿ ಗುಂಡಿಗಳು ಉಂಟಾಗಿರುವ ಬಗ್ಗೆ ಚರಂಡಿಯಲ್ಲಿ ಹೂಳು ತುಂಬಿರುವ ಬಗ್ಗೆ ಹಾಗೂ ಕೆಲವು ಕಡೆ ಸರಿಯಾಗಿ ಕಸವಿಲೇವಾರಿಮಾಡದ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು, ಸದರಿ ಕೆಲಸಗಳನ್ನು ಆದ್ಯತೆಯ ಮೇಲೆ ಕೈಗೊಳ್ಳಲು ಸಂಬಂಧ ಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

ಕ್ರಮ ಸಹಾಯಕ ಅಭಿಯಂತರರು / ಕಿರಿಯ ಅಭಿಯಂತರರು / ಕಿರಿಯ ಅಭಿಯಂತರರಯ ಆರೋಗ್ಯ ಪರಿವೀಕ್ಷಕರು

- **ವಾರ್ಡ್ ವ್ಯಾಪ್ತಿಯಲ್ಲಿ ಲಸಿಕಾ ಕಾರ್ಯಕ್ರಮದ ಬಗ್ಗೆ:-**

  ವಾರ್ಡ್ ವ್ಯಾಪ್ತಿಯಲ್ಲಿ ಲಸಿಕಾ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ನಿರ್ವಹಿಸಲಾಗುತ್ತಿರುವುದಾಗಿ ವೈದ್ಯಾಧಿಕಾರಿಗಳು, ಬಾಗಲಗುಂಟೆ ಪ್ರಾಥಮಿಕ ಆರೋಗ್ಯ ಕೇಂದ್ರ ರವರು ತಿಳಿಸಿದರು.

13/03/24

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 14, ಬಾಗಲಗುಂಟೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

13/03

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.14, ಬಾಗಲಗುಂಟೆ
ಮತ್ತು ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧಿಕಾರಿಗಳ ಮಾಹಿತಿಗಾಗಿ:-

1) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ. ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಆರೋಗ್ಯ ವೈದ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
5) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
8) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
11) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
12) ಕಛೇರಿ ಪ್ರತಿ.